# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 843
ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 12-12-2023.
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಜ್ ಯಾತ್ರಾ ಪ್ರಯಾಣಿಕರಿಗೆ ಕಲ್ಪಿಸಿರುವ ಸೌಲಭ್ಯಗಳೇನು; | ರಾಜ್ಯದಲ್ಲಿ ಹಜ್ ಯಾತ್ರಿಕರಿಗೆ ಕಲ್ಪಿಸಿರುವ ಸೌಲಭ್ಯಗಳು ಈ ಕೆಳಗಿನಂತಿವೆ.<br><br>1. ಹಜ್ ಯಾತ್ರೆಗಾಗಿ ಅರ್ಜಿದಾರರು ಆನ್‌ಲೈನ್ ಮೂಲಕ ಮುಂಬೈನ ಭಾರತೀಯ ಹಜ್ ಸಮಿತಿಯವರು ನೀಡಿರುವ ಕೆಲ ಮಾನದಂಡಗಳನ್ನು ಅನುಸರಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲನೆ ಮಾಡುವುದು, ದಾಖಲೆಗಳನ್ನು ಸ್ಕ್ಯಾನ್ ಮಾಡುವುದು, ಮುಂಬೈನ ಭಾರತೀಯ ಹಜ್ ಸಮಿತಿಯ ಸರ್ವರ್‌ನಲ್ಲಿ ಅಪ್‌ಲೋಡ್ ಮಾಡುವುದು.<br><br>2. ಮುಂಬೈನ ಭಾರತೀಯ ಹಜ್ ಸಮಿತಿಯ ವತಿಯಿಂದ ಕಲ್ಪಿಸಿರುವ ಕೇಂದ್ರೀಕೃತ ವೆಬ್ ಸರ್ವರ್‌ನಿಂದ ಗಣಕೀಕೃತ ಲಾಟರಿ (ಖುರ್ರಾ) ಮುಖಾಂತರ ಜಿಲ್ಲಾವಾರು ನಿಗದಿಪಡಿಸಿರುವ ಕೋಟಾದನ್ವಯ ಹಜ್ ಯಾತ್ರಿಕರ ಆಯ್ಕೆ ಪ್ರಕ್ರಿಯೆ ಆಯೋಜಿಸುವುದು.<br><br>3. ಆಯ್ಕೆಯಾದ ಹಜ್ ಯಾತ್ರಿಕರಿಂದ ಅಂತರರಾಷ್ಟ್ರೀಯ ಪಾಸ್‌ಪೋರ್ಟ್‌ಗಳನ್ನು ವೈದ್ಯಕೀಯ ಪ್ರಮಾಣ ಪತ್ರ ಮತ್ತು ಇನ್ನಿತರೆ ಅಗತ್ಯ ದಾಖಲೆಗಳನ್ನು ಸಂಗ್ರಹ ಮಾಡಿ, ಮುಂಬೈನ ಭಾರತೀಯ ಹಜ್ ಸಮಿತಿಯ ಕಚೇರಿಗೆ ವರ್ಗಾಯಿಸುವುದು. |

| | | |
|---|---|---|
| | | 4. ಆಯ್ಕೆಯಾದ ಯಾತ್ರಿಕರಿಗೆ ಹಾಗೂ ಖಾಸಗಿಯಾಗಿ ಹಜ್ ಯಾತ್ರೆಗೆ ಪ್ರಯಾಣಿಸುವ ಯಾತ್ರಿಕರು ಸೇರಿದಂತೆ ಮೆನಂಜೈಟಿಸ್ ಲಸಿಕೆ ಚುಚ್ಚುಮದ್ದು ಕಾರ್ಯಕ್ರಮವನ್ನು ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಆಯೋಜಿಸುವುದು.<br>5. ಯಾತ್ರಿಕರಿಗೆ ಹಜ್ ಯಾತ್ರೆಯು ಸುಗಮವಾಗಿ ಹಾಗೂ ಸುಖಕರವಾಗಿ ಮಾಡಲು ಸಹಾಯಕವಾಗುವಂತೆ ತರಬೇತಿ (ಓರಿಯಂಟೇಷನ್) ಕಾರ್ಯಕ್ರಮವನ್ನು ರಾಜ್ಯ ಹಜ್ ಸಮಿತಿಯು ಆಯೋಜಿಸಲಾಗುತ್ತದೆ.<br>6. ಸೌದಿ ಅರೇಬಿಯಾದಲ್ಲಿ ಕರ್ನಾಟಕ ರಾಜ್ಯದಿಂದ ಬಂದ ಹಜ್ ಯಾತ್ರಿಕರ ಕಲ್ಯಾಣವನ್ನು ನೋಡಿಕೊಳ್ಳಲು ಹಜ್ ಸ್ವಯಂ ಸೇವಕರನ್ನು (ಖಾದಿಮುಲ್ ಹುಜ್ಜಾಜ್) ನಿಯೋಜನೆ ಮಾಡುವುದು. ಈ ನಿಯೋಜನೆಗಾಗಿ ತಗಲುವ ವೆಚ್ಚವನ್ನು ಮುಂಬೈನ ಭಾರತೀಯ ಹಜ್ ಸಮಿತಿ ಹಾಗೂ ರಾಜ್ಯ ಹಜ್ ಸಮಿತಿಯು 50:50ರ ಅನುಪಾತದಲ್ಲಿ ಭರಿಸುತ್ತದೆ. ಹಜ್-2023ನಲ್ಲಿ ಮುಂಬೈನ ಭಾರತೀಯ ಹಜ್ ಸಮಿತಿಯ ನಿರ್ದೇಶನದಂತೆ ಪ್ರತಿ 300 ಯಾತ್ರಿಕರಿಗಾಗಿ ಒಬ್ಬ ಖಾದಿಮುಲ್ ಹುಜ್ಜಾಜ್‌ರನ್ನು ರಾಜ್ಯ ಹಜ್ ಸಮಿತಿಯು ನಿಯೋಜಿಸಲಾಗುತ್ತದೆ.<br>7. ಭಾರತೀಯ ಹಜ್ ಸಮಿತಿಯಿಂದ ಸ್ವೀಕೃತವಾಗುವ ಕನ್ನಡ, ಇಂಗ್ಲೀಷ್ ಮತ್ತು ಉರ್ದು ಭಾಷೆಗಳಲ್ಲಿ ಹಜ್ ಗೈಡ್ ಪುಸ್ತಕಗಳನ್ನು ಪ್ರತಿ ವರ್ಷ ಆಯ್ಕೆಯಾದ ಹಜ್ ಯಾತ್ರಿಕರಿಗೆ ಉಚಿತವಾಗಿ ಸರಬರಾಜು ಮಾಡಲಾಗುತ್ತದೆ.<br>8. ಯಾವುದೇ ಹಜ್ ಸಂಬಂಧಿತ ಮಾಹಿತಿಯನ್ನು ಯಾತ್ರಾರ್ಥಿಗಳಿಗೆ ತಲುಪಿಸಲಾಗುವುದು.<br>9. ಹಜ್ ಯಾತ್ರಿಗಳ ಸುಗಮ, ಸುಖಕರ ಪ್ರಯಾಣಕ್ಕಾಗಿ ಹಾಗೂ ಸೌದಿ ಅರೇಬಿಯಾಕ್ಕೆ ಹಜ್ ಯಾತ್ರಾರ್ಥಿಗಳ ಪ್ರಯಾಣ ಅರಂಭವಾಗುವ ಮುನ್ನ ರಾಜ್ಯ ಹಜ್ ಸಮಿತಿಯು ಹಜ್ ಕ್ಯಾಂಪನ್ನು ಆಯೋಜಿಸುತ್ತಿದ್ದು, ಈ ಹಜ್ ಕ್ಯಾಂಪ್‌ನಲ್ಲಿ ತಮ್ಮ ಪ್ರಯಾಣಕ್ಕೆ ಮುನ್ನ ಹಜ್ ಯಾತ್ರಿಗಳು |

| | | |
|---|---|---|
| | | ಉಳಿದುಕೊಳ್ಳಲು ಎಲ್ಲಾ ವ್ಯವಸ್ಥೆಯನ್ನು (ಬೋರ್ಡಿಂಗ್ ಮತ್ತು ಲಾಡ್ಜಿಂಗ್) ರಾಜ್ಯ ಹಜ್ ಸಮಿತಿಯು ಮಾಡಿದ್ದು, ಕಾಗದ ಪತ್ರಗಳ ಹಂಚಿಕೆ, ವಿದೇಶಿ ವಿನಿಮಯ ಹಂಚಿಕೆಯ ವ್ಯವಸ್ಥೆ, ಯಾತ್ರಾರ್ಥಿಗಳನ್ನು ವಿಮಾನ ನಿಲ್ದಾಣಕ್ಕೆ ತಲುಪಿಸುವ ಸಾರಿಗೆ ವ್ಯವಸ್ಥೆ ಹಾಗೂ ಇನ್ನಿತರೆ ವ್ಯವಸ್ಥೆಗಳನ್ನು ಹಜ್ ಕ್ಯಾಂಪ್‌ಗಳಲ್ಲಿಯೇ ಸಂಬಂಧಪಟ್ಟ ಇಲಾಖೆಗಳ ಸಹಕಾರದಿಂದ ಒದಗಿಸಲಾಗುತ್ತದೆ.<br><br>10. ಹಜ್ ವಿಮಾನ ಕಾರ್ಯಾಚರಣೆ ಇತ್ಯಾದಿಗಳ ಯಶಸ್ವಿ ವ್ಯವಸ್ಥೆಗಾಗಿ, ಭಾರತ ಸರ್ಕಾರ, ರಾಜ್ಯ ಸರ್ಕಾರ, ಮುಂಬೈನ ಭಾರತೀಯ ಹಜ್ ಸಮಿತಿ ಮತ್ತು ಇನ್ನಿತರೆ ಸಂಸ್ಥೆಗಳಾದ ಸೌದಿ ಅರೇಬಿಯನ್ ಏರ್‌ಲೈನ್ಸ್ / ಏರ್ ಇಂಡಿಯಾ, ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ, ಇಮಿಗ್ರೇಷನ್, ಕಸ್ಟಮ್ಸ್, ಪೋಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಇತರೇ ಸ್ವಯಂಸೇವಾ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸುವುದು.<br><br>11. ಹಜ್ ವಿಮಾನಗಳಲ್ಲಿ ಪ್ರಯಾಣಿಸುವ ಯಾತ್ರಿಕರ ನಿರ್ಗಮನ ಹಾಗೂ ಆಗಮನದ ಸಮಯಗಳಲ್ಲಿ ವಸತಿ, ಸಾರಿಗೆ ಇತ್ಯಾದಿಗಳಿಗೆ ಸಹಾಯಕ ವ್ಯವಸ್ಥೆಗಳನ್ನು ಮಾಡಲಾಗುವುದು. |
| ಆ. | ರಾಜ್ಯದಲ್ಲಿ ಹಜ್ ಭವನಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ನಿರ್ಮಾಣ ಮಾಡಲಾಗುವುದು? | ಹೌದು.<br>ಮಂಗಳೂರು (ದಕ್ಷಿಣ ಕನ್ನಡ ಜಿಲ್ಲೆ) ಹಾಗೂ ಕಲ್ಬುರ್ಗಿಯಲ್ಲಿ ನಿರ್ಮಾಣ ಮಾಡಲಾಗುವುದು. |

ಸಂಖ್ಯೆ:MWD 136 LMQ 2023

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು